**<u>ಅಸಲು ದಾವಾ ಸಂಖ್ಯೆಃ 131 /2025</u> ಪಿ.ಡಬ್ಲೂ -1**

ದಿನಾಂಕಃ 25.07.2026 ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

**<u>ಮುಖ್ಯವಿಚಾರಣೆಃ ವಾದಿ ಪರ ಶ್ರೀ ಪಿ ಟಿ ವಕೀಲರಿಂದಃ-</u>**

ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಚಾರಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿ ನನ್ನದಾಗಿದೆ.

1. ನನ್ನ ಹೈಸ್ಕೂಲ್ ದಾಖಲಾತಿಯ ರಿಜಿಸ್ಟರ್ ನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು,
2. ನನ್ನ 3 ವ್ಯಾಸಾಂಗ ಪ್ರಮಾಣ ಪತ್ರಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-2 ರಿಂದ ನಿಪಿ-4 ಎಂದು,
3. ನನ್ನ 2 ವರ್ಗಾವಣೆ ಪ್ರಮಾಣ ಪತ್ರಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-5 ಮತ್ತು ನಿಪಿ-6 ಎಂದು,
4. ನನ್ನ ಎಸ್ ಎಸ್ ಎಲ್ ಸಿ ಅಂಕ ಪಟ್ಟಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-7 ಎಂದು,
5. ನನ್ನ ತಾಯಿಯ ಆಧಾರಕಾರ್ಡ್ ಹಾಜರುಪಡಿಸಿದ್ದು ಅದನ್ನು ನಿಪಿ-8 ಎಂದು,
6. ದಿಃ 30.12.2024 ರಂದು ನಾನು ಪ್ರತಿವಾದಿಗಳಿಗೆ ಕಳುಹಿಸಿದ್ದ ಲೀಗಲ್ ನೋಟೀಸ್ ನ ಕಛೇರಿ ಪ್ರತಿಯನ್ನು 9 ಅಂಚೆ ರಸೀದಿ 8 ಅಂಚೆ ಸ್ವೀಕೃತಿ, 1 ಟ್ರ್ಯಾಕ್ ಕನಸೈನಮೆಂಟ್ ಪ್ರಿಂಟ್ ಔಟ್ ಗಳೊಂದಿಗೆ ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-9 ರಿಂದ ನಿಪಿ-27 ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲಿಗೆ ಮಾನ್ಯ ಎ ಜಿ ಪಿ ರವರು ಸಮಯವಕಾಶ ಕೋರಿದ್ದರಿಂದ ಮುಂದುಡಲಾಯಿತು.</u>**

(ಮೇಲ್ಕಂಡ ಸಾಕ್ಷ್ಯವನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

**ಓ ಹೇ ಕೇ ಸ ಇದೆ**

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ನೆಲಮಂಗಲ.**